**02ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ನ್ಯಾಯಾಲಯ , ಚನ್ನಗಿರಿ .**

**ಸಿ.ಸಿ. ಸಂಖ್ಯೆಃ 3386/2024**

**ಹೆಸರುಃ** ಪ್ರಸನ್ನ **ಸಿ.ಡಬ್ಲ್ಯೂಃ 3**

**ತಂದೆಃ** ಬಸಪ್ಪ **ಪಿ.ಡಬ್ಲ್ಯೂಃ 1**

**ವಯಸ್ಸುಃ 32 ವರ್ಷ**

**ಉದ್ಯೋಗಃ ಕೂಲಿ ಕೆಲಸ**

**ವಾಸಸ್ಥಳಃ ಕುಳೇನೂರು ಗ್ರಾಮ, ಚನ್ನಗಿರಿ ತಾಃ**

**ಸಾಕ್ಷಿಗೆ ದಿನಾಂಕಃ 04-02-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸರ್ಕಾರಿ ಸಹಾಯಕ ಅಭಿಯೋಜಕರಿಂದ**

ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆ ಸ್ಥಳ ಪಂಚನಾಮೆಯಾಗಿದ್ದು, ಅದನ್ನು ನಿಪಿ-1 ಎಂದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸದರಿ ದಾಖಲೆಗೆ ಸಹಿಯನ್ನು ಸಂಜೆ 4.30 ಗಂಟೆಗೆ ನಾನು ಪೊಲೀಸರ ಕೋರಿಕೆ ಮೇರೆಗೆ ಮಾಡಿರುತ್ತೇನೆ ಸದರಿ ನಿಪಿ-1 ರಲ್ಲಿನ ಸಂಗತಿ ನನಗೆ ಗೊತ್ತಿಲ್ಲ. ಸದರಿ ನಿಪಿ-1 ರ ಸಮಯಕ್ಕೆ ನನ್ನ ಜೊತೆ ಯಾರು ಇದ್ದರು ಎಂದು ನನಗೆಗೊತ್ತಿಲ್ಲ.

ಈಗ ನೋಡುತ್ತಿರುವ ಫೋಟೋದಲ್ಲಿ ಚಾಸಾ-2 ಮತ್ತು 4 ರವರು ಇದ್ದಾರೆ ಸದರಿ ಫೋಟೋವನ್ನು ನಿಪಿ-1ರ ಸಮಯದಲ್ಲಿ ತೆಗೆಯಲಾಗಿರುತ್ತದೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ನಿಪಿ-2ನ್ನು ಯಾರು, ಯಾವ ವಿಚಾರವಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸದರಿ ಪ್ರಕರಣದ ವಿಚಾರವಾಗಿ ನಾನು ಯಾವುದೇ ಹೇಳಿಕೆ ಕೊಟ್ಟಿಲ್ಲ. ನನಗೆ ಈ ಪ್ರಕರಣದ ಕುರಿತು ಯಾವುದೇ ಮಾಹಿತಿ ಇಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಮಹಜರು ಮತ್ತು ಹೇಳಿಕೆಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಮಹಜರು ಮತ್ತು ಹೇಳಿಕೆಯನ್ನು ನೋಡಲಾಗಿ ಸಾಕ್ಷಿಯು ಮಹಜರು ಮತ್ತು ಹೇಳಿಕೆಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**<u>ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ</u>**

ದಿಃ 05-04-2024 ರಂದು ಚಾಸಾ-7 ರವರು ನನ್ನನ್ನು ಹಾಗೂ ಚಾಸಾ-2 ರವರನ್ನು ಸ್ಥಳ ಪಂಚನಾಮೆ ಜರುಗಿಸಬೇಕೆಂದು ಪಂಚರಾಗಿ ಸಹಕರಿಸಲು ಕೋರಿದರು ಎಂದರೆ ಸರಿಯಲ್ಲ, ಸದರಿ ಸಮಯಕ್ಕೆ ಚಾಸಾ-4 ರವರು ತೋರಿಸಿದ ಸ್ಥಳದಲ್ಲಿ ನಿಪಿ-1 ರಂತೆ ನಮ್ಮ ಸಮಕ್ಷಮ ಸದರಿ ಪಂಚನಾಮೆಯನ್ನು ಬೆಳಿಗ್ಗೆ 10.00 ರಿಂದ 11.00 ಗಂಟೆವರೆಗೆ ಜರುಗಿಸಿದರು ಎಂದರೆ ಸರಿಯಲ್ಲ. ಸದರಿ ಎಲ್ಲಾ ಸಂಗತಿಗಳನ್ನು ಓದಿ ಹೇಳಿದ ತರುವಾಯ ನಾನು ನಿಪಿ-1 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ನಿಪಿ-1 ರ ಸಮಯದಲ್ಲಿ ನಿಪಿ-2 ರಂತೆ ಪೊಟೋ ತೆಗೆಯಲಾಗಿದೆ ಎಂದರೆ ಸರಿಯಲ್ಲ.

ಸದರಿ ಎಲಾಲ ವಿಚಾರದ ಕುರಿತು ಅದೇ ದಿನ --------------ರಂತೆ ಹೇಳಿಕೆ ನೀಡಿದ್ದೆನೆ ಎಂದರೆ ಸರಿಯಲ್ಲ, ಸದರಿ ಸಾಕ್ಷಿಯ ಅಲ್ಲಗಳೆದ ಹೇಳಿಕೆಯನ್ನು ನಿಪಿ-3 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರ ಗೊತ್ತಿದ್ದರು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೆನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು - ಆರೋಪಿತರ ಪರ ವಕೀಲರಿಂದ – ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)** **ಓ.ಹೇ.ಕೇ. ಸರಿ ಇದೆ.**

**02ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ, ಚನ್ನಗಿರಿ.**